# 20ಕ್ಕೆ ಸಿಎಂ ಉತ್ತರ

**ವಿಧಾನಸಭೆ:** ಜಂಟಿ ಅಧಿವೇಶನವನ್ನುದ್ದೇಶಿಸಿ ರಾಜ್ಯಪಾಲರು ಮಾಡಿದ ಭಾಷಣದ ಮೇಲಿನ ವಂದನಾ ನಿರ್ಣಯ ಕುರಿತ ಚರ್ಚೆಗೆ ಮುಖ್ಯಮಂತ್ರಿ ಯಡಿಯೂರಪ್ಪ ಫೆ.20ರಂದು ವಿಧಾನಸಭೆಯಲ್ಲಿ ಉತ್ತರಿಸಲಿದ್ದಾರೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಮಾಹಿತಿ ನೀಡಿದರು. ಮಂಗಳವಾರ ಮಧ್ಯಾಹ್ನ ಭೋಜನ ವಿರಾಮದ ನಂತರ ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆ ಮಾತನಾಡಿ, ಮುಖ್ಯಮಂತ್ರಿ, ಕಾನೂನು ಸಚಿವರು ಹಾಗೂ ವಿರೋಧ ಪಕ್ಷದ ನಾಯಕರನ್ನು ಒಳಗೊಂಡಂತೆ ಸದನ ಕಲಾಪ ಸಲಹಾ ಸಮಿತಿಯ ಸಭೆ ನಡೆಸಲಾಗಿದೆ. ಬುಧವಾರ ವಿಧಾನಸಭೆಯ ಕಲಾಪ ಪ್ರಾರಂಭವಾಗುತ್ತಿದ್ದಂತೆ ಪ್ರತಿಪಕ್ಷದ ನಾಯಕರ ನಿಲುವಳಿ ಸೂಚನೆಯಡಿ ಚರ್ಚಿಸಲು ಬಯಸಿದ್ದ ವಿಷಯವನ್ನು ನಿಯಮ 69ಕ್ಕೆ ಪರಿವರ್ತಿಸಿ ಚರ್ಚೆಗೆ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು. ಮಾ.2 ಮತ್ತು 3ರಂದು ಸಂವಿಧಾನದ ಆಶಯಗಳು, ಸ್ವರೂಪ ಹಾಗೂ ಸಾಕಾರ ಕುರಿತಂತೆ ವಿಧಾನಸಭೆಯಲ್ಲಿ ಎರಡು ದಿನಗಳ ವಿಶೇಷ ಚರ್ಚೆ ನಡೆಯಲಿದೆ. ಬಿಎಸ್‌ಸಿಯಲ್ಲಿ ಕಲಾಪದ ರೂಪುರೇಷಗಳ ಬಗ್ಗೆ ಚರ್ಚಿಸಿ, ರಚನಾತ್ಮಕ ಚರ್ಚೆಗೆ ನೀಲನಕ್ಷೆ ಸಿದ್ಧಪಡಿಸಲಾಗುವುದು ಎಂದರು.